## 17. ಸೋಂಕು ತಡೆಗೆ ಕಾರ್ಯಸೂಚಿ

ಕೊರೋನಾ ಸೋಂಕು ಹೆಚ್ಚಿರುವ ಬೆಂಗಳೂರು ನಗರ, ದಕ್ಷಿಣ ಕನ್ನಡ, ಧಾರವಾಡ, ಬಳ್ಳಾರಿ, ಉಡುಪಿ, ಕಲಬುರಗಿ, ಬೀದರ್, ಗದಗ, ಮೈಸೂರು ಜಿಲ್ಲೆಗಳಲ್ಲಿ ರ‍್ಯಾಪಿಡ್ ಆಂಟಿಜೆನ್ ಕಿಟ್ ರವಾನಿಸಲು ನಿರ್ಧರಿಸಿರುವ ರಾಜ್ಯ ಸರ್ಕಾರವು ಸೋಂಕು ಹರಡದಂತೆ ಮತ್ತು ಕೊರೋನಾ ಪೀಡಿತರ ಸಾವಿನ ಪ್ರಮಾಣ ತಗ್ಗಿಸಲು ಸಮರೋಪಾದಿಯಲ್ಲಿ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಸೂಚಿಸಿದೆ.

ಮುಖ್ಯಮಂತ್ರಿ ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಈ ಸೂಚನೆ ನೀಡಲಾಗಿದ್ದು, ಕಲಬುರಗಿ, ಗದಗ, ಮೈಸೂರು ಮತ್ತು ಬೀದರ್ ಜಿಲ್ಲೆಗಳಲ್ಲಿ ಸಾವಿನ ಪ್ರಮಾಣ ಹೆಚ್ಚಾಗಿದೆ. ಬೀದರ್ ಜಿಲ್ಲೆಯಲ್ಲಿ ಅತಿ ಹೆಚ್ಚಾಗಿದೆ. ತ್ವರಿತವಾಗಿ ನಿಯಂತ್ರಣಕ್ಕೆ ತರಲು ಕ್ರಮ ಜರುಗಿಸಬೇಕು. ಮರಣ ಪ್ರಕರಣಕ್ಕೆ ಸಂಬಂಧಿಸಿದಂತೆ ತಜ್ಞರಿಂದ ವರದಿ ಪಡೆದು ಕಳುಹಿಸುವಂತೆ ಸೂಚಿಸಲಾಗಿದೆ. ಕಟ್ಟುನಿಟ್ಟಾದ ಸೀಲ್‌ಡೌನ್ ಜಾರಿ ಆಗಬೇಕು. ಧಾರ್ಮಿಕ ಸ್ಥಳ, ಮಾರುಕಟ್ಟೆ ಮೊದಲಾದಡೆಗೆ ಜನ ಗುಂಪುಗೂಡುವುದನ್ನು ತಡೆಯಬೇಕು. ಸಾರ್ವಜನಿಕ ಉತ್ಸವ, ಸಮಾರಂಭ, ಹಬ್ಬ, ಜಾತ್ರೆ ಮೊದಲಾದವುಗಳನ್ನು ಕಡ್ಡಾಯವಾಗಿ ನಿಷೇದಿಸಬೇಕು. ಕ್ವಾರೆಂಟೈನ್‌ಗೆ ಒಳಗಾದವರ ಬಗ್ಗೆ ನಿಗಾ, ಸಂಪರ್ಕಿತರ ಪತ್ತೆ, ಮನೆಮನೆ ಸಮೀಕ್ಷೆಗೆ ಬೂತ್ ಮಟ್ಟದ ಸಮಿತಿ ರಚಿಸಬೇಕು. ಈಗಾಗಲೇ ರಾಜ್ಯ ಸರ್ಕಾರವು ಒಂದು ಲಕ್ಷ ರ‍್ಯಾಪಿಡ್ ಆಂಟಿಜೆನ್ ಕಿಟ್ ಖರೀದಿಸಿದೆ. ತುರ್ತು ಪ್ರಕರಣಗಳಲ್ಲಿ ರ‍್ಯಾಪಿಡ್ ಕಿಟ್‌ಗಳನ್ನೇ ಬಳಸಬೇಕು. ಕಂಟೈನ್‌ಮೆಂಟ್ ವಲಯಗಳಲ್ಲಿ ಕಟ್ಟುನಿಟ್ಟಾದ ಕ್ರಮ, ಕ್ಷೇತ್ರಮಟ್ಟದಲ್ಲಿ ಗುತ್ತಿಗೆ ಆಧಾರದಲ್ಲಿ ಆರೋಗ್ಯ ಸಿಬ್ಬಂದಿ ನೇಮಕ, ಹೊರ ಊರುಗಳಿಂದ ಬರುವವರನ್ನು ಕಡ್ಡಾಯವಾಗಿ ಹೋಂ ಕ್ವಾರಂಟೈನ್‌ಗೆ ಒಳಪಡಿಸುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

**ಕೊರೋನಾ ಪರೀಕ್ಷೆ ಕಡ್ಡಾಯ:**–ಹಾಸಿಗೆ ನೀಡಲು ನಿರಾಕರಿಸುವ ಆಸ್ಪತ್ರೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಕೊರೋನಾ ರಹಿತ ರೋಗಿಗಳ ಚಿಕಿತ್ಸೆಗೆ ಯಾವುದೇ ತೊಂದರೆ ಆಗಬಾರದು. 60 ವರ್ಷ ಮೇಲ್ಪಟ್ಟ ಮತ್ತು ತೀವ್ರ ಸ್ವರೂಪದ ಕಾಯಿಲೆಗೆ ತುತ್ತಾದವರಿಗೆ ಪ್ರತ್ಯೇಕ ಚಿಕಿತ್ಸೆ ಕಲ್ಪಿಸತಕ್ಕದ್ದು. ಉಸಿರಾಟದ ತೊಂದರೆ ಇರುವವರಿಗೆ ಕೊರೋನಾ ಪರೀಕ್ಷೆಗೆ ಕಡ್ಡಾಯವಾಗಿ ಒಳಪಡಿಸುವಂತೆ ಸೂಚಿಸಿದ್ದಾರೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:14.07.2020